# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 962

ಸದಸ್ಯರ ಹೆಸರು : ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 14.03.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮ ಪಂಚಾಯತ್ ಸದಸ್ಯರ ಮತ್ತು ಅಧ್ಯಕ್ಷರುಗಳ ನ್ಯಾಯಯುತ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸದರಿ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಗ್ರಾಮ ಪಂಚಾಯತ್ ಸದಸ್ಯರ ಮತ್ತು ಅಧ್ಯಕ್ಷರುಗಳ ನ್ಯಾಯಯುತ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಬೇಡಿಕೆಗಳು ಮತ್ತು ಅವುಗಳನ್ನು ಈಡೇರಿಸಲು ತೆಗೆದುಕೊಂಡ ಕ್ರಮಗಳ ವಿವರಗಳನ್ನು ಅನುಬಂಧದಲ್ಲಿ ನೀಡಿದೆ. |
| (ಆ) | ಗ್ರಾಮ ಪಂಚಾಯತ್ ಅಧ್ಯಕ್ಷರಿಗೆ ಉಚಿತ ಬಸ್ ಪಾಸ್, ಪಿಂಚಣಿ ನೀಡುವ ಸೌಲಭ್ಯ, ಟೋಲ್ ಫ್ರೀ ಪಾಸ್ ಗಳನ್ನು ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಈ ಬೇಡಿಕೆಗಳ ಕುರಿತು ಸರ್ಕಾರದ ನಿಲುವೇನು? | ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಗ್ರಾಮ ಪಂಚಾಯತಿಗಳ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರುಗಳು ಅವರ ಪ್ರಕಾರ್ಯಗಳನ್ನು ನೆರವೇರಿಸುವುದಕ್ಕಾಗಿ, ಗ್ರಾಮ ಪಂಚಾಯತಿ ಪರಿಮಿತಿ ಆಚೆ ಅವರು ಮಾಡಿದ ಪ್ರಯಾಣಕ್ಕಾಗಿ ಇತ್ತೀಚಿನ ಪ್ರಯಾಣ ದರದನ್ವಯ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಪಾವತಿಸಲಾಗುತ್ತಿದೆ.<br><br>ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಉಚಿತ ಬಸ್ ಪಾಸ್, ಪಿಂಚಣಿ ಸೌಲಭ್ಯ ಮತ್ತು ಟೋಲ್ ಫ್ರೀ ಪಾಸ್ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಗ್ರಾಅಪ 201 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ

## ಗ್ರಾಮ ಪಂಚಾಯಿತಿ ಸದಸ್ಯರ ಬೇಡಿಕೆಗಳು ಮತ್ತು ತೆಗೆದುಕೊಂಡ ಕ್ರಮಗಳ ವಿವರಗಳು:

| ಕ್ರ. ಸಂ | ಬೇಡಿಕೆ | ತೆಗೆದುಕೊಳ್ಳಲಾದ ಕ್ರಮ |
|---|---|---|
| 1 | ಸಂವಿಧಾನದ ಪ್ರಕರಣ 243-ಜಿ ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 58(4)ರ ಅನ್ವಯ ಗ್ರಾಮದಿ ಪಂಚಾಯತಿಗಳು ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವಂತಾಗಲು, ಅಧಿನಿಯಮದ ಪ್ರಕರಣ 58, ಹಾಗೂ 1 ನೇ ಅನುಸೂಚಿಯಲ್ಲಿರುವ ಜವಾಬ್ದಾರಿಗಳನ್ನು ನಿರ್ವಹಿಸಲು ಪ್ರಕರಣ 2(28-ಸಿ) ಅನ್ವಯ ಜವಾಬ್ದಾರಿ ನಕ್ಷೆ ರಚಿಸಬೇಕು. ಜವಾಬ್ದಾರಿ ನಕ್ಷೆಯಲ್ಲಿರುವಂತೆ ಆಯಾ ಜವಾಬ್ದಾರಿಗೆ ಸಂಬಂಧಿಸಿದ ಅಧಿಕಾರ, ಹಣಕಾಸು, ಮಾನವ ಸಂಪನ್ಮೂಲ ಹಾಗೂ ಜವಾಬ್ದಾರಿ ನಿರ್ವಹಿಸುವ ಸ್ವಾತಂತ್ರವನ್ನು ಪಂಚಾಯತಿಗಳಿಗೆ ವರ್ಗಾಯಿಸಬೇಕು ಹಾಗೂ ನೇಮಕವಾಗಿರುವ/ ವರ್ಗಾವಣೆಯಾಗಿ ಬಂದಿರುವ ಅಧಿಕಾರಿಗಳು ಪಂಚಾಯತಿಗಳಿಗೆ ಉತ್ತರದಾಯಿತ್ವ ಹೊಂದಿರುವ ಹಾಗೆ ಕ್ರಮ ಕೈಗೊಳ್ಳಬೇಕು. | ಈ ಕೆಳಕಂಡ ಇಲಾಖೆಗಳ ಕಾರ್ಯಕ್ರಮ/ಚಟುವಟಿಕೆಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಿ ಅಧಿಸೂಚನೆ ಹೊರಡಿಸಲಾಗಿದೆ.<br>(1) ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ<br>(2) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ<br>(3) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,<br>(4) ಕೃಷಿ ಇಲಾಖೆ<br>(5) ತೋಟಗಾರಿಕೆ ಇಲಾಖೆ<br>(6) ಜಲಾನಯನ ಅಭಿವೃದ್ಧಿ ಇಲಾಖೆ ಮತ್ತು<br>(7) ರೇಷ್ಮೆ ಇಲಾಖೆ<br>(8) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ |
| 2 | ಗ್ರಾಮ ಪಂಚಾಯತಿಗಳು ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸುವಂತಾಗಲು, ಗ್ರಾಮ ಪಂಚಾಯತಿ ಅಧ್ಯಕ್ಷರು ಕಾರ್ಯನಿರ್ವಾಹಕ ಮುಖ್ಯಸ್ಥನಾಗಿ ಕಾರ್ಯನಿರ್ವಹಿಸುವಂತಾಗಲು ಹಾಗೂ ಪಿಡಿಓ ಮುಖ್ಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುವಂತಾಗಲು ಗ್ರಾಮ ಪಂಚಾಯತಿ ಕಛೇರಿ ನಿರ್ವಹಣಾ ಕೈಪಿಡಿಯನ್ನು ರಚಿಸಬೇಕು. | ಕಛೇರಿ ಕಾರ್ಯ ನಿರ್ವಹಣಾ ಕೈಪಿಡಿ ಕರಡು ಪ್ರಕಟಿಸಲಾಗಿದ್ದು, 190ಕ್ಕೂ ಹೆಚ್ಚು ಆಕ್ಷೇಪಣೆಗಳು ಸಲ್ಲಿಕೆಯಾಗಿರುತ್ತವೆ. ಕಛೇರಿ ಕಾರ್ಯ ನಿರ್ವಹಣಾ ಕೈಪಿಡಿ ಅಂತಿಮಗೊಳಿಸಲು ರಚಿಸಲಾದ ಸಮಿತಿಯು ಆಕ್ಷೇಪಣೆಗಳನ್ನು ಪರಿಶೀಲಿಸುತ್ತಿದ್ದು, ಪರಿಶೀಲನೆಯ ನಂತರ ಅಂತಿಮ ಕೈಪಿಡಿಯನ್ನು ಹೊರಡಿಸಲಾಗುವುದು. |

| | | |
|---|---|---|
| 3 | ಗ್ರಾಮ ಪಂಚಾಯತಿಯ ಸ್ಥಾಯಿ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುವಂತಾಗಲು ನಿಯಮಗಳನ್ನು ರೂಪಿಸಬೇಕು. | ಗ್ರಾಮ ಪಂಚಾಯತಿ ಸ್ಥಾಯಿ ಸಮಿತಿಗಳ ಕರಡು ನಿಯಮಗಳನ್ನು ರೂಪಿಸಲಾಗಿದ್ದು, ಅನುಮೋದನೆ ಹಂತದಲ್ಲಿದೆ. |
| 4 | ಗ್ರಾಮ ಪಂಚಾಯತಿ ಹಂತದ ಕೆ.ಡಿ.ಪಿ ಸಭೆಗಳು ಯಶಸ್ವಿಯಾಗಿ ನಡೆಯುವಂತಾಗಲು, ಎಲ್ಲಾ ಇಲಾಖೆಗಳ ಗ್ರಾಮ ಪಂಚಾಯತಿ ಹಂತದ ಅಧಿಕಾರಿಗಳು ಭಾಗವಹಿಸುವುದನ್ನು ಖಾತ್ರಿಗೊಳಿಸಲು ಕೆಡಿಪಿ ಸಭೆಗಳನ್ನು ಶಾಸನಬದ್ಧಗೊಳಿಸಬೇಕು. | ಕೆಡಿಪಿ ಸಭೆಗಳನ್ನು ಶಾಸನಬದ್ಧಗೊಳಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಗೆ ಸಮಗ್ರವಾಗಿ ತಿದ್ದುಪಡಿ ತರುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| 5 | ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ರಾಜ್ಯ ಶಿಷ್ಟಾಚಾರದ ವ್ಯಾಪ್ತಿಗೆ ತರಬೇಕು. ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ನಡೆಯುವ ಸರ್ಕಾರದ ಕಾರ್ಯಕ್ರಮಗಳಿಗೆ ಆಹ್ವಾನಿಸಬೇಕು ಹಾಗೂ ಆಹ್ವಾನ ಪತ್ರಿಕೆ ಮತ್ತು ಶಿಲಾಫಲಕಗಳಲ್ಲಿ ಅವರ ಹೆಸರುಗಳನ್ನು ಮುದ್ರಿಸಬೇಕು. ವಿಧಾನಸೌಧ ಹಾಗೂ ಇತರೆ ಸರ್ಕಾರಿ ಕಚೇರಿಗಳಲ್ಲಿ, ಟೋಲ್‌ಗಳಲ್ಲಿ ಮುಕ್ತ ಪ್ರವೇಶಕ್ಕೆ ಅವಕಾಶ ಮಾಡಿಕೊಡಬೇಕು. | ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ನಡೆಯುವ ಸರ್ಕಾರದ ಸಭೆ ಸಮಾರಂಭಗಳ ಆಯೋಜನೆಯಲ್ಲಿ ಪಾಲಿಸಬೇಕಾದ ಶಿಷ್ಟಾಚಾರ ಕುರಿತು ಪರಿಶೀಲನೆಯಲ್ಲಿದೆ. |
| 6 | ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವಧನವನ್ನು ಕೇರಳ ರಾಜ್ಯದಲ್ಲಿರುವಂತೆ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ 15,000 ರೂಗಳು, ಉಪಾಧ್ಯಕ್ಷರಿಗೆ 12,000 ರೂಗಳು ಹಾಗೂ ಸದಸ್ಯರಿಗೆ 10,000 ರೂಗಳಿಗೆ ಹೆಚ್ಚಿಸಬೇಕು ಎಂದು ಕೋರಿದರು. ಜೊತೆಗೆ ಪಿಂಚಣಿ ನೀಡುವ ವ್ಯವಸ್ಥೆ ಜಾರಿಗೊಳಿಸಬೇಕು, ಉಪವೇಶನ ಶುಲ್ಕವನ್ನು 500 ರೂಗಳಿಗೆ ಹೆಚ್ಚಿಸಬೇಕು, ಗ್ರಾಮ ಪಂಚಾಯತಿ ಸದಸ್ಯರಿಗೆ ಜನರ ಕೆಲಸಗಳಿಗಾಗಿ ಓಡಾಡಲು ಉಚಿತ ಬಸ್ ಪಾಸ್ ವ್ಯವಸ್ಥೆ ನೀಡಬೇಕು ಮತ್ತು ಆರೋಗ್ಯ ವಿಮೆ ವ್ಯವಸ್ಥೆ ಮಾಡಬೇಕು. | 1. ಸರ್ಕಾರದ ಆದೇಶ ಸಂ: ಗ್ರಾಅಪಂ 126 ಜಿಪಿಎಸ್ 2022 ದಿನಾಂಕ:18.12.2022 ರನ್ವಯ ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.3000/- ಗಳಿಂದ ರೂ.6000/- ಗಳಿಗೆ, ಉಪಾಧ್ಯಕ್ಷರಿಗೆ ರೂ.2000/- ಗಳಿಂದ ರೂ.4000/- ಗಳಿಗೆ ಮತ್ತು ಸದಸ್ಯರಿಗೆ ರೂ.1000/- ಗಳಿಂದ ರೂ.2000/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.<br>2. ಪ್ರಸ್ತುತ ನೀಡಲಾಗುತ್ತಿರುವ ಉಪವೇಶನ ಶುಲ್ಕವನ್ನು ₹ 300/- ಗಳಿಂದ ₹ 350/- ಗಳಿಗೆ ಹೆಚ್ಚಿಸಿ ದಿನಾಂಕ:16-01-2025ರಂದು ಆದೇಶ ಹೊರಡಿಸಲಾಗಿದೆ. |

| | | |
|---|---|---|
| | | 3. ಗ್ರಾಮ ಪಂಚಾಯತಿಗಳ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರುಗಳು ಗ್ರಾಮ ಪಂಚಾಯತಿಗೆ ಸಂಬಂಧಿಸಿದ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ವ್ಯಾಪ್ತಿಯಿಂದ ಹೊರಗಡೆ ಪ್ರಯಾಣ ಮಾಡಿದಾಗ ಅವರುಗಳಿಗೆ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆಗಳನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994ರನ್ವಯ ಇತ್ತೀಚಿನ ಪ್ರಯಾಣ ದರಗಳನ್ವಯ ಪಾವತಿಸಲಾಗುತ್ತಿದೆ.<br>4. ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ವಿಧಾನಸೌಧ ಹಾಗೂ ವಿಕಾಸಸೌಧಗಳಿಗೆ ಪ್ರವೇಶಿಸಲು ಅನುಕೂಲವಾಗುವಂತೆ ಗುರುತಿನ ಚೀಟಿ (ID Card) ವಿತರಿಸುವ ಕುರಿತು ಕ್ರಮವಹಿಸಲಾಗುವುದು.<br>5. ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳು ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಆರೋಗ್ಯ ಶುಶ್ರೂಷೆಯ ಸವಲತ್ತುಗಳನ್ನು ಪಡೆಯಬಹುದಾಗಿರುತ್ತದೆ.<br>6. ಪ್ರಧಾನ ಮಂತ್ರಿ ಜೀವನ್ ಜ್ಯೋತಿ ವಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆಗಳಲ್ಲಿ ವಿಮಾ ಸೌಲಭ್ಯ ಪಡೆಯಬಹುದಾಗಿದೆ. |
| 7 | ಮೇಲಿನ ಹಂತದ ಅಧಿಕಾರಿಗಳು ಗ್ರಾಮ ಪಂಚಾಯತಿಗಳನ್ನು ತಮ್ಮ ಕೆಳಗಿನ ಶಾಖಾ ಕಚೇರಿಗಳಂತೆ ನಡೆಸಿಕೊಳ್ಳುವುದನ್ನು ನಿಲ್ಲಿಸಬೇಕು. | ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳನ್ನು ಗೌರವಯುತವಾಗಿ ನಡೆಸಿಕೊಳ್ಳುವ ಬಗ್ಗೆ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು |

| | | |
|---|---|---|
| | | ಮತ್ತು ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದಿನಾಂಕ:02-01-2025 ರಂದು ನಿರ್ದೇಶನ ನೀಡಲಾಗಿದೆ. |
| 8 | ಗ್ರಾಮ ಪಂಚಾಯತಿಗಳು ನಿರ್ವಹಣೆಮಾಡುವ ಬೀದಿ ದೀಪಗಳು ಹಾಗೂ ಕುಡಿಯುವ ನೀರು ಸರಬರಾಜು ಘಟಕಗಳಿಗೆ ವಿದ್ಯುತ್ ಸರಬರಾಜು ಕಂಪನಿಗಳು ಮೀಟರ್ ಅಳವಡಿಸದೆ ಮತ್ತು ಎನರ್ಜಿ ಆಡಿಟಿಂಗ್ ಮಾಡದೆ ಸರಾಸರಿ ಆಧಾರದ ಮೇಲೆ ವಿದ್ಯುತ್ ಬಿಲ್ ನೀಡುತ್ತಿದ್ದು, ಸರಿಯಾದ ಲೆಕ್ಕವಿಲ್ಲದೆ ವಿದ್ಯುತ್ತ್ ಬಿಲ್ ಕಟ್ಟಲಾಗುತ್ತಿದೆ. ಅಲ್ಲದೆ ದಿನಾಂಕ 31-3-2015ರ ವರೆಗೆ ರಾಜ್ಯ ಸರ್ಕಾರ ಗ್ರಾಮ ಪಂಚಾಯತಿಗಳ ವಿದುತ್ ಬಿಲ್ ಬಾಕಿಯನ್ನು ಪಂಚಾಯತಿಗಳ ಪರವಾಗಿ ಕಟ್ಟಿರುವುದಾಗಿ ತಿಳಿಸಿದ್ದರು, ವಿದ್ಯುತ್ ಕಂಪನಿಗಳು ಹಳೆಯ ಬಾಕಿಯನ್ನು ಬಿಲ್ ಗಳಲ್ಲಿ ತೋರಿಸುತ್ತಲೇ ಬರುತ್ತಿವೆ. ಕೂಡಲೆ ಸರ್ಕಾರ ಮಧ್ಯ ಪ್ರವೇಶಿಸಿ ಸಮಸ್ಯೆಯನ್ನು ಬಗೆಹರಿಸಬೇಕು ವಿತರಣೆಯಲ್ಲಾಗುತ್ತಿರುವ ವಿದ್ಯುತ್ ಸೋರಿಕೆಯಿಂದ ಉಂಟಾಗುತ್ತಿರುವ ಆದಾಯದ ಕೊರತೆಯನ್ನು ಗ್ರಾಮ ಪಂಚಾಯತಿಗಳ ಬಳಕೆಯ ಮೇಲೆ ಹಾಕುತ್ತಿದ್ದು. ಇದು ನಿಲ್ಲಬೇಕು. ಕೃಷಿ ಉಪಯೋಗಕ್ಕಾಗಿ ಉಚಿತ ವಿದ್ಯುತ್ ನೀಡಿ, ಗೃಹಬಳಕೆಗೆ ರಿಯಾಯತಿ ನೀಡಿರುವ ಸರ್ಕಾರ/ ವಿದ್ಯುತ್ ಕಂಪನಿಗಳು, ಗ್ರಾಮೀಣ ಕುಡಿಯುವ ನೀರಿನ ಯೋಜನೆಗೆ ವಾಣಿಜ್ಯ ದರ ವಿಧಿಸುತ್ತಿರುವುದು ಪಂಚಾಯತಿಗಳನ್ನು ಆರ್ಥಿಕ ಸಂಕಷ್ಟಕ್ಕೆ ದೂಡಿದೆ. ಆದ್ದರಿಂದ ಗ್ರಾಮೀಣ ಕುಡಿಯುವ ನೀರು ಯೋಜನೆಗೂ ರಿಯಾಯತಿ ದರದಲ್ಲಿ ವಿದ್ಯುತ್ ನೀಡಬೇಕು. | ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೀದಿ ದೀಪಗಳ ಹಾಗೂ ಕುಡಿಯುವ ನೀರಿನ ಸ್ಥಾವರಗಳ ವಿದ್ಯುತ್ ಬಿಲ್‌ನ್ನು ಪಾವತಿಸಲು ಬೆಸ್ಕಾಂ ವಿಭಾಗದಲ್ಲಿ "ಇ-ಬೆಳಕು" ತಂತ್ರಾಂಶವನ್ನು ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ/161/ಇ-ಆಡಳಿತ/2021, ದಿನಾಂಕ:03.06.2022 ರಲ್ಲಿ ಜಾರಿಗೊಳಿಸಿದ್ದು, ಬಿಲ್‌ಗಳ ಸಮನ್ವಯತೆ, ಬಿಲ್‌ಗಳ ಪಾವತಿ, ನಿಷ್ಕ್ರಿಯ ಸ್ಥಾವರಗಳ ಸಂಪರ್ಕ ಕಡಿತ, ಸ್ಥಾವರಗಳ ಮೀಟರ್ ಮಾಪನಗಳಂತಹ ಕಾರ್ಯಗಳನ್ನು ಸದರಿ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.<br><br>"ಇ-ಬೆಳಕು" ತಂತ್ರಾಂಶವನ್ನು ಇನ್ನುಳಿದ ಮೂರು ವಿಭಾಗಗಳಿಗೆ ವಿಸ್ತರಿಸುವ ಬಗ್ಗೆ ಇಂಧನ ಇಲಾಖೆಯೊಂದಿಗೆ ಸಮಾಲೋಚಿಸಲಾಗಿದ್ದು, ತಂತ್ರಾಂಶದಲ್ಲಿ ತಾಂತ್ರಿಕ ಮಾರ್ಪಾಡುಗಳನ್ನು ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ನಂತರದಲ್ಲಿ ತಂತ್ರಾಂಶವನ್ನು ಉಳಿದ ಮೂರು ವಿಭಾಗಗಳಿಗೂ ವಿಸ್ತರಿಸಲು ಕ್ರಮವಹಿಸಲಾಗುವುದು.<br><br>CEGIS ಸಂಸ್ಥೆಯು ಅತಿ ಹೆಚ್ಚು ವಿದ್ಯುತ್ ಬಿಲ್ ಹೊಂದಿರುವ ಮತ್ತು ಅತಿ ಕಡಿಮೆ ವಿದ್ಯುತ್ ಬಿಲ್ ಹೊಂದಿರುವ ತಲಾ ಒಂದು ಗ್ರಾಮ ಪಂಚಾಯತಿಗಳಲ್ಲಿ ವಿದ್ಯುತ್ ಬಿಲ್ ಬಾಕಿ ಕುರಿತು ಅಧ್ಯಯನ ನಡೆಸಿ ಮಧ್ಯಂತರ ವರದಿ ಸಲ್ಲಿಸಿರುತ್ತದೆ. ವರದಿಯು ಹೆಸ್ಕಾಂ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| | | ವಿದ್ಯುತ್ ಶುಲ್ಕ ಪಾವತಿಸಲು ಬಾಕಿ ಇರುವ ಗ್ರಾಮ ಪಂಚಾಯಿತಿಗಳಲ್ಲಿನ ಕುಡಿಯುವ ನೀರು, ಬೀದಿ ದೀಪಗಳ ವಿದ್ಯುತ್ ಸಂಪರ್ಕ ಕಡಿತಗೊಳಿಸುತ್ತಿರುವ ಕುರಿತಂತೆ ಇಂಧನ ಇಲಾಖೆಯೊಂದಿಗೆ ಚರ್ಚಿಸಿ ಸಂಪರ್ಕ ಕಡಿತಗೊಳಿಸದಂತೆ ಕ್ರಮವಹಿಸಲಾಗುವುದು. |
| 9 | ಪಂಚಾಯತ್ ರಾಜ್ ಸಂಸ್ಥೆಗಳು ರಾಜ್ಯ ಸರ್ಕಾರದ ಲಾಂಛನವನ್ನು ಬಳಸುವಂತಿಲ್ಲವಾದ್ದರಿಂದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅರ್ಥಪೂರ್ಣವಾದಂತಹ ಪ್ರತ್ಯೇಕ ಲಾಂಛನವನ್ನು ಸೃಜಿಸಿ ನೀಡಬೇಕು. | ಪ್ರತ್ಯೇಕ ಲಾಂಛನದ ವಿನ್ಯಾಸವು ಸರ್ಕಾರದಿಂದ ಅನುಮೋದನೆಯಾಗಿದ್ದು, ಲಾಂಛನ ಉಪಯೋಗಿಸುವ ಕುರಿತು ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗಿದ್ದು, ಅನುಮೋದನೆ ಹಂತದಲ್ಲಿರುತ್ತದೆ. |
| 10 | ಪಂಚಾಯತ್ ಆಡಳಿತ ಸೇವೆ ಜಾರಿಗೊಳಿಸಬೇಕು. | ಸರ್ಕಾರದ ಪರಿಶೀಲನೆಯಲ್ಲಿದೆ. |
| 11 | ಗ್ರಾಮ ಪಂಚಾಯಿತಿಯ ನಿಧಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ ಶೇ.25ರ ಅನುದಾನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ನೀಡುವ ಸೌಲಭ್ಯಗಳಲ್ಲಿ ನಿಗದಿಪಡಿಸಿರುವ ಘಟಕ ವೆಚ್ಚ ಹೆಚ್ಚಿಸಬೇಕು. | ಗ್ರಾಮ ಪಂಚಾಯಿತಿಯ ನಿಧಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರಿಗೆ ಕಾಯ್ದಿರಿಸಿದ ಶೇ.25ರ ಅನುದಾನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ನೀಡುವ ಸೌಲಭ್ಯಗಳ ಘಟಕ ವೆಚ್ಚ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |